**MVC: 821/2024**
**P.W-1**

**<u>ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ</u>**

ದಿನಾಂಕಃ 11.02.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ</u>**

ನಾನು ದಿನಾಂಕ 11.02.2026 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಪ್ರ.ವ.ವ ದಾಖಲೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 1 ಎಂದು, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 2 ಎಂದು, ಚಾರ್ಜ್ ಶೀಟ್ ನಮೂನೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 3 ಎಂದು, ಕೃತ್ಯಸ್ಥಳದ ಪಂಚನಾಮೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 4 ಎಂದು, ಜಪ್ತು ಪಂಚನಾಮೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 5 ಎಂದು, ಐ.ಎಂ.ವಿ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 6 ಎಂದು, ಪಿ.ಎಂ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 7 ಎಂದು, ಶವ ಪಂಚನಾಮೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 8 ಎಂದು, ನನ್ನ ಮಗನ ಶಾಲಾ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 9 ಎಂದು, ನನ್ನ ಗಂಡನ ತಾತನ ಹೆಸರಿನಲ್ಲಿರುವ ಜಮೀನಿನ ಪಹಣಿ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ- 10 ರಿಂದ 16 ಎಂದು ಗುರುತಿಸಲಾಯಿತು.

(ಎದುರುದಾರರ ಪರ ವಕೀಲರು ಗೈರು ಹಾಜರಾಗಿದ್ದು ಮತ್ತು ತಕರಾರು ಸಲ್ಲಿಸದೆ ಇರುವ ಕಾರಣ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**